# ನಿರ್ಭಯಾ ಟೆಂಡರ್‌ನಲ್ಲಿ ಅವ್ಯವಹಾರ ಶಂಕೆ; ಹೈಕೋರ್ಟ್‌ಗೆ ಪಿಐಎಲ್ ಸಲ್ಲಿಕೆ

■ **ವಿಕ ಸುದ್ದಿಲೋಕ** ಬೆಂಗಳೂರು 1/1/21

ನಿರ್ಭಯಾ ಯೋಜನೆಯಡಿ ನಗರದಲ್ಲಿ ಅನುಷ್ಠಾನಗೊಳ್ಳಲಿರುವ 620 ಕೋಟಿ ರೂ.ಗಳ ಟೆಂಡರ್ ಪ್ರಕ್ರಿಯೆಯಲ್ಲಿ ಭಾರಿ ಅವ್ಯವಹಾರ ನಡೆದಿರುವ ಶಂಕೆ ಇದ್ದು ಈ ಬಗ್ಗೆ ಸಿಬಿಐ ತನಿಖೆ ನಡೆಸುವಂತೆ ಕೋರಿ ವಕೀಲೆ ಗೀತಾ ಮಿಶ್ರಾ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದಾರೆ.



ನ್ಯಾ.ಆರ್.ದೇವದಾಸ್ ಹಾಗೂ ನ್ಯಾ. ನಾಗಪ್ರಸನ್ನ ಅವರನ್ನೊಳಗೊಂಡ ರಜಾ ಕಾಲದ ಪೀಠ ಅರ್ಜಿಯನ್ನು ಕೈಗೆತ್ತಿಕೊಂಡು ವಿಚಾರಣೆಯನ್ನು ಒಂದು ವಾರಗಳ ಕಾಲ ಮುಂದೂಡಿತು.

ಕೇಂದ್ರ ಸರಕಾರ ಪ್ರಾಯೋಜಿತ ಸೇಫ್ ಸಿಟಿ ಪ್ರಾಜೆಕ್ಟ್ (ನಿರ್ಭಯಾ ಯೋಜನೆ) ಯಡಿ ರಾಜ್ಯ ಸರಕಾರದ ಪೂರಕ ಅನುದಾನ ಒಳಗೊಂಡು ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಒಟ್ಟು 1067 ಕೋಟಿ ರೂ.ಗಳ ಕಾಮಗಾರಿ ಸೃಷ್ಟಿಸಬೇಕಾಗಿದೆ. ಈ ಪೈಕಿ 620 ಕೋಟಿ ರೂ.ಗಳ ಕಾಮಗಾರಿಗೆ ಟೆಂಡರ್ ಆಹ್ವಾನಿಸಲಾಗಿದ್ದು, ಈ ಟೆಂಡರ್ ಪ್ರಕ್ರಿಯೆಯಲ್ಲಿ ಹಲವಾರು ಅಕ್ರಮಗಳು ನಡೆದಿವೆ ಎಂಬ ಶಂಕೆ ವ್ಯಕ್ತವಾಗಿದೆ. ಈ ಬಗ್ಗೆ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಪ್ರಧಾನಮಂತ್ರಿಗಳ ಕಾರ್ಯಾಲಯ ಮತ್ತು ಕೇಂದ್ರ ಗೃಹ ಸಚಿವಾಲಯಕ್ಕೆ ದೂರು ಕೂಡ ನೀಡಿದೆ. ಆದಾದ ಬಳಿಕ ಐಪಿಎಸ್ ಅಧಿಕಾರಿಗಳ ನಡುವೆ ಟೆಂಡರ್‌ಗೆ ಸಂಬಂಧಿಸಿದಂತೆ ಬಹಿರಂಗ ಆರೋಪ-ಪ್ರತ್ಯಾರೋಪ ಕೇಳಿ ಬಂದಿದೆ. ಆದಾಗ್ಯೂ ಟೆಂಡರ್ ಪ್ರಕ್ರಿಯೆ ಅಬಾಧಿತವಾಗಿ ನಡೆದಿದೆ ಎಂದು ಅರ್ಜಿದಾರ ವಕೀಲೆ ಗೀತಾ ಮಿಶ್ರಾ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಅಲ್ಲದೆ, ರಾಜ್ಯ ಸರಕಾರ ನಡೆಸುತ್ತಿರುವ ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿರುವ ಆರೋಪ ಇರುವುದರಿಂದ ನೈಸರ್ಗಿಕ ನ್ಯಾಯ ಸಿದ್ಧಾಂತದನ್ವಯ ರಾಜ್ಯ ಸರಕಾರವೇ ಪ್ರಕರಣದ ತನಿಖೆ ನಡೆಸುವಂತಿಲ್ಲ. ಪೊಲೀಸ್ ಅಧಿಕಾರಿ ಹೇಮಂತ್ ನಿಂಬಾಳ್ಕರ್ ವಿರುದ್ಧ ಈಗಾಗಲೇ 4,500 ಕೋಟಿ ರೂ. ಮೌಲ್ಯದ ಐಎಂಎ ಮೋಸ ಪ್ರಕರಣದಲ್ಲಿ ಸಿಬಿಐನಿಂದ ದೋಷಾರೋಪ ಪಟ್ಟಿ ಸಲ್ಲಿಕೆಯಾಗಿದ್ದು, ಇದೀಗ ಅದೇ ಅಧಿಕಾರಿ ಅಧ್ಯಕ್ಷತೆಯಲ್ಲಿ ಟೆಂಡರ್ ಆಹ್ವಾನ ಸಮಿತಿ ರಚನೆಯಾಗಿದೆ. ಅಲ್ಲದೆ, ಪೊಲೀಸ್ ಅಧಿಕಾರಿಯೇ ಟೆಂಡರ್ ಆರೋಪದಲ್ಲಿ ತನಿಖಾಧಿಕಾರಿಯಾಗಿದ್ದಾರೆ. ಹೀಗಾಗಿ, ಟೆಂಡರ್ ಪ್ರಕ್ರಿಯೆಗೆ ಕೂಡಲೇ ಮಧ್ಯಂತರ ತಡೆಯಾಜ್ಞೆ ನೀಡಬೇಕು. ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಅರ್ಜಿಯಲ್ಲಿ ಕೋರಿದ್ದಾರೆ.